## ಕರ್ನಾಟಕ ಸರ್ಕಾರ

ಸಂಖ್ಯೆ :MWD 16 LMR 2014

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸ ಸೌಧ,
ಬೆಂಗಳೂರು, ದಿನಾಂಕ: 16-10-2014.

### ಸುತ್ತೋಲೆ

ದಿನಾಂಕ: 14.12.2009 ರ ಕೇಂದ್ರ ಸರ್ಕಾರದಿಂದ ಹೊರಡಿಸಿರುವ ಪ್ರಧಾನ ಮಂತ್ರಿ ಮಾರ್ಗಸೂಚಿಯನುಸಾರ ಸರ್ಕಾರದ ವಿವಿಧ ಯೋಜನೆಗಳ ಸೌಲಭ್ಯಗಳನ್ನು ಅಲ್ಪಸಂಖ್ಯಾತರ ಸಮುದಾಯದ ಅರ್ಹ ಫಲಾನುಭವಿಗಳಿಗೆ ತಲುಪಿಸುವ ಸಂಬಂಧ ಆಯಾ ಜಿಲ್ಲೆಗಳಲ್ಲಿ ಒದಗಿಸಲಾಗಿರುವ ಅನುದಾನದ ಶೇಕಡಾ 15ರಷ್ಟನ್ನು ಅಲ್ಪಸಂಖ್ಯಾತರಿಗಾಗಿ ಮೀಸಲಿಟ್ಟು ಭೌತಿಕ ಗುರಿ ನಿಗಧಿಪಡಿಸಲು ಸೂಚಿಸಲಾಗಿರುತ್ತದೆ.

ದಿನಾಂಕ: 04.06.2014 ರಂದು ನಡೆದ ರಾಜ್ಯ ಮಟ್ಟದ ಪ್ರಧಾನ ಮಂತ್ರಿಗಳ ಹೊಸ 15 ಅಂಶಗಳ ಕಾರ್ಯಕ್ರಮದ ಅನುಷ್ಠಾನದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಈ ವಿಷಯವನ್ನು ಕೂಲಂಕೂಷವಾಗಿ ಚರ್ಚಿಸಿದ ತರುವಾಯ ರಾಜ್ಯದ ವಿವಿಧ ಜಿಲ್ಲೆಗಳಲ್ಲಿರುವ ಅಲ್ಪಸಂಖ್ಯಾತರ ಸಮುದಾಯಗಳ ಜನಸಂಖ್ಯೆಯ ಅನುಪಾತದ ಆಧಾರದನ್ವಯ ವಿವಿಧ ಯೋಜನಾ ಕಾರ್ಯಕ್ರಮಗಳಲ್ಲಿ ಆರ್ಥಿಕ ಹಾಗೂ ಭೌತಿಕ ಗುರಿ ನಿಗಧಿಪಡಿಸಿ ಆಯಾ ಸಮುದಾಯಗಳ ಆರ್ಥಿಕ ಅಭಿವೃದ್ಧಿಗಾಗಿ ಕ್ರಮ ವಹಿಸಲು ತೀರ್ಮಾನಿಸಲಾಗಿದೆ.

ರಾಜ್ಯದಲ್ಲಿ ಅಲ್ಪಸಂಖ್ಯಾತರ ಜನಸಂಖ್ಯೆ ಶೇಕಡಾ 15 ಕ್ಕೂ ಹೆಚ್ಚಾಗಿದ್ದರೂ ಸಹ ರಾಜ್ಯ ಮತ್ತು ಕೇಂದ್ರ ಸರ್ಕಾರದಿಂದ ಅನುಷ್ಠಾನಗೊಳಿಸಲಾಗುತ್ತಿರುವ ಹಲವಾರು ಪ್ರಗತಿ ಪರ ಯೋಜನೆಗಳ ಲಾಭ ಗಣನೀಯ ಪ್ರಮಾಣದಲ್ಲಿ ದೊರೆಯದೇ ಅಲ್ಪಸಂಖ್ಯಾತರ ಸಮುದಾಯಗಳು ಆರ್ಥಿಕ, ಶೈಕ್ಷಣಿಕ ಹಾಗೂ ಸಾಮಾಜಿಕವಾಗಿ ಹಿಂದುಳಿದಿರುವುದರಿಂದ, ಅವರುಗಳಿಗೆ ಸಮಾಜದ ಮುಖ್ಯ ವಾಹಿನಿಗೆ ತರಲು ಉದ್ದೇಶಿಸಲಾಗಿದೆ.

ಆದುದರಿಂದ, ರಾಜ್ಯ ಸರ್ಕಾರದ ವಿವಿಧ ಇಲಾಖೆಗಳಲ್ಲಿನ ಅಂದರೆ ಮುಖ್ಯವಾಗಿ ಪಂಚಾಯತ್ ರಾಜ್ ಮತ್ತು ಗ್ರಾಮೀಣಾಭಿವೃದ್ಧಿ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ನಗರಾಭಿವೃದ್ಧಿ ಇಲಾಖೆ, ವಸತಿ ಇಲಾಖೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಸಹಕಾರ ಇಲಾಖೆ, ಕಾರ್ಮಿಕ ಇಲಾಖೆ, ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆ, ಕೃಷಿ ಇಲಾಖೆ, ತೋಟಗಾರಿಕೆ ಇಲಾಖೆ, ಕಂದಾಯ ಇಲಾಖೆ ಮತ್ತು ಇತರ ಇಲಾಖೆಗಳ ಫಲಾನುಭವಿ ಆಧಾರಿತ ಯೋಜನಾ ಕಾರ್ಯಕ್ರಮದಡಿಯಲ್ಲಿ ಬಿಡುಗಡೆಗೊಳಿಸುವ ಅನುದಾನದಲ್ಲಿ ಜಿಲ್ಲಾವಾರು ಆರ್ಥಿಕ ಹಾಗೂ ಭೌತಿಕ ಗುರಿ ನಿಗದಿಪಡಿಸುವಾಗ, ಕೇಂದ್ರ ಸರ್ಕಾರದ ಮಾರ್ಗಸೂಚಿ ಹಾಗೂ ರಾಜ್ಯ ಮಟ್ಟದ ಪ್ರಧಾನ ಮಂತ್ರಿಗಳ 15 ಅಂಶಗಳ ಕಾರ್ಯಕ್ರಮದ ಅನುಷ್ಠಾನದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಕೈಗೊಂಡಿರುವ ತೀರ್ಮಾನದಂತೆ ಆಯಾ ಜಿಲ್ಲೆಗಳಲ್ಲಿರುವ ಅಲ್ಪಸಂಖ್ಯಾತರ ಸಮುದಾಯಗಳ ಜನಸಂಖ್ಯಾ ಅನುಪಾತಕ್ಕೆ ಅನುಗುಣವಾಗಿ ಅನುದಾನವನ್ನು ಮೀಸಲಿರಿಸಿ ಆರ್ಥಿಕ ಹಾಗೂ ಭೌತಿಕ ಗುರಿಯನ್ನು ಕಡ್ಡಾಯವಾಗಿ ನಿಗಧಿಪಡಿಸಿ ಸರ್ಕಾರಿ ಆದೇಶವನ್ನು ಕೂಡಲೇ ಹೊರಡಿಸಿ ಯೋಜನೆಗಳನ್ನು ಕಟ್ಟುನಿಟ್ಟಾಗಿ ಅನುಷ್ಠಾನಗೊಳಿಸಲು ಈ ಮೂಲಕ ಸೂಚಿಸಲಾಗಿದೆ.

(ಕೌಶಿಕ್ ಮುಖರ್ಜಿ) 17/10/14
ಮುಖ್ಯ ಕಾರ್ಯದರ್ಶಿ